**ದಿನಾಂಕಃ 08–07–2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟಿ ಸವಾಲುಃ ಡೆಪ್ಯುಟಿ ಡಿಫೆನ್ಸ್ ಕೌನ್ಸಿಲ್ ರವರಿಂದ ಆರೋಪಿ ಪರವಾಗಿ**

4. ಚಾಸಾ–2 ಶಶಿಕುಮಾರ್ ಸಿಪಿಸಿ 66 ರವರು ಆರೋಪಿಯನ್ನು ಠಾಣೆಗೆ ಕರೆತಂದು ನನ್ನ ಮುಂದೆ ಹಾಜರುಪಡಿಸಿರುತ್ತಾರೆ. ನಮ್ಮ ಪೊಲೀಸ್ ಠಾಣೆಯಲ್ಲಿ ಸಿಸಿ ಕ್ಯಾಮರಾ ಇರುತ್ತದೆ ಎಂದರೆ ಸರಿ. ಆರೋಪಿತ ನನ್ನ ಮುಂದೆ ನೀಡಿದ ಆತನ ಹೇಳಿಕೆಯನ್ನು ನಾನು ಡಿಜಿಟಲ್ ರೂಪದಲ್ಲಿ ರೆಕಾರ್ಡು ಮಾಡಿರುವುದಿಲ್ಲ. ಆರೋಪಿತ ಆತನ ಪತ್ನಿಯನ್ನು ಕೊಲೆ ಮಾಡಿರುತ್ತಾನೆ ಎಂದು ನನ್ನ ಮುಂದೆ ನೀಡಿರುತ್ತಾನೆ ಎನ್ನಲಾದ ಹೇಳಿಕೆ ಗಂಭೀರ ಸ್ವರೂಪದ್ದು ಎಂದರೆ ಸರಿ. ಆರೋಪಿತನನ್ನು ವಿಚಾರಣೆ ಮಾಡಿದ ನಂತರ ಆರೋಪಿತ ನೀಡಿದ ಹೇಳಿಕೆಯ ಬಗ್ಗೆ ನಾನು ನನ್ನ ಮೇಲಾಧಿಕಾರಿಗಳಿಗೆ ಮಾಹಿತಿ ನೀಡಿರುತ್ತೇನೆ. ಆರೋಪಿತನ ಹೇಳಿಕೆ ಮೇರೆಗೆ ಪ್ರಥಮ ವರ್ತಮಾನ ವರದಿ ದಾಖಲಿಸುವ ಪೂರ್ವದಲ್ಲಿ ನಾನು ಆರೋಪಿತನ ಜೊತೆ ಕೃತ್ಯ ನಡೆದ ಸ್ಥಳಕ್ಕೆ ಹೋಗಿ ಪರಿಶೀಲನೆ ನಡೆಸಿಲ್ಲ. ಚಾಸಾ–2 ಶಶಿಕುಮಾರ್ ರವರು ನಾನು ತಿಳಿಸಿರುವಂತೆ ನನ್ನ ಮುಂದೆ ಆರೋಪಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಆರೋಪಿತ ನನ್ನ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿತ ನನ್ನ ಮುಂದೆ ಯಾವುದಾದರೂ ಹೇಳಿಕೆ ನೀಡಿದ್ದಲ್ಲಿ ನಾನು ಸದರಿ ಹೇಳಿಕೆಯನ್ನು ಡಿಜಿಟಲ್ ರೂಪದಲ್ಲಿ ರೆಕಾರ್ಡ್ ಮಾಡುತ್ತಿದ್ದೆ ಎಂದರೆ ಸರಿಯಲ್ಲ. ಆರೋಪಿತ ನನ್ನ ಮುಂದೆ ಯಾವುದೇ ಹೇಳಿಕೆ ನೀಡದಿದ್ದರೂ ಸಹ ನಿಪಿ–2 ಹೇಳಿಕೆಯನ್ನು ಪ್ರಕರಣಕ್ಕಾಗಿ ಸೃಷ್ಟಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತನ ಪತ್ನಿಯ ಸಾವಿಗೂ ಆರೋಪಿತನಿಗೂ ಯಾವುದೇ ಸಂಬಂಧ

ಇರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿತ ಆತನ ಪತ್ನಿಯನ್ನು ಕೊಲೆ ಮಾಡಿರುವುದಾಗಿ ನನ್ನ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ ಎಂದರೆ ಸರಿಯಲ್ಲ. ಚಾಸಾ-2 ರವರು ಆರೋಪಿಯನ್ನು ನನ್ನ ಮುಂದೆ ಹಾಜರುಪಡಿಸಿಲ್ಲ ಹಾಗೂ ನಿಪಿ-1 ರಂತೆ ನನ್ನ ಮುಂದೆ ಯಾವುದೇ ವರದಿ ನೀಡಿಲ್ಲ ಎಂದರೆ ಸರಿಯಲ್ಲ. ಘಟನೆಯ ಸಂಬಂಧ ವಿಚಾರಣೆ ನಡೆಸಲು ಮನೆಯಲ್ಲಿದ್ದ ಆರೋಪಿಯನ್ನು ಠಾಣೆಗೆ ಕರೆತಂದು ಆತನ ವಿರುದ್ಧ ಪ್ರಕರಣ ದಾಖಲ್ಮಾಡಿರುತ್ತೇನೆಂದರೆ ಸರಿಯಲ್ಲ. ಅಂಕಿ ಅಂಶಗಳಿಗಾಗಿ ಸುಳ್ಳು ಪ್ರಕರಣವನ್ನು ದಾಖಲಿಸಲಾಗಿದೆ ಎಂದರೆ ಸರಿಯಲ್ಲ. ಆರೋಪಿತ ಯಾವುದೇ ಕೊಲೆ ಮಾಡಿದ್ದೇ ಆಗಿದ್ದಲ್ಲಿ ಕೂಡಲೇ ನಾನಾಗಲೀ ಅಥವಾ ನನ್ನ ಹಿರಿಯ ಅಧಿಕಾರಿಗಳಾಗಲೀ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡುತ್ತಿದ್ದೆವು ಎಂದರೆ ಸರಿಯಲ್ಲ.

**ಮರು ವಿಚಾರಣೆ: ಇಲ್ಲ**

(ಸಾಕ್ಷಿಯ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ.ಸರಿ ಇದೆ.

2ನೇ ಅಧಿಕ ಜಿಲ್ಲಾ ಮತ್ತು ಸೆಷನ್ಸ್
ನ್ಯಾಯಾಧೀಶರು, ಹಾಸನ.